ಕರ್ನಾಟಕ ಸರ್ಕಾರ

# ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-1

**ಸಂಖ್ಯೆ:ಸಿ4(6)ಪ್ರೌಶಿ/ಪ್ರೌಶಾ/ಶಾ.ಕಾ.ಪ್ರಾ/55/2021-22** **ದಿನಾಂಕ:06/01/2022.**

**- ಜ್ಞಾಪನ -**

ವಿಷಯ: ರಾಜ್ಯದ ಶಾಲೆಗಳಲ್ಲಿ ಕೋವಿಡ್-19 ರೂಪಾಂತರಿ ವೈರೆಸ್ "ಓಮಿಕ್ರಾನ್" ವೈರಾಣು ಸೋಂಕು ಹರಡುವಿಕೆಯನ್ನು ನಿಯಂತ್ರಿಸಲು ಮತ್ತು ಸಾರ್ವಜನಿಕ ಆರೋಗ್ಯದ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳುವ ಕುರಿತು.

ಉಲ್ಲೇಖ:
1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಮತ್ತು ಅಧ್ಯಕ್ಷರು, ರಾಜ್ಯ ಕಾರ್ಯಕಾರಿಣಿ ಸಮಿತಿ, ಬೆಂಗಳೂರು ಇವರ ಆದೇಶ ಸಂಖ್ಯೆ:ಆರ್‌ಡಿ.158.ಟಿಎನ್‌ಆರ್.2020. ದಿ:04/01/2022.
2. ಈ ಕಛೇರಿಯ ಇದೇ ಸಮ ಸಂಖ್ಯೆಯ ಪತ್ರ ದಿನಾಂಕ:05/01/2022.
3. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಮತ್ತು ಅಧ್ಯಕ್ಷರು, ರಾಜ್ಯ ಕಾರ್ಯಕಾರಿಣಿ ಸಮಿತಿ, ಬೆಂಗಳೂರು ಇವರ ಆದೇಶ ಸಂಖ್ಯೆ:ಆರ್‌ಡಿ.158.ಟಿಎನ್‌ಆರ್.2020. ದಿ:05/01/2022.

*******

ವಿಷಯಕ್ಕೆ ಸಂಬಂಧಿಸಿದಂತೆ, ರಾಜ್ಯದಲ್ಲಿ ಕೋವಿಡ್-19 ರೂಪಾಂತರಿ ವೈರೆಸ್ "ಓಮಿಕ್ರಾನ್" ವೈರಾಣು ಸೋಂಕು ಹರಡುವಿಕೆಯನ್ನು ನಿಯಂತ್ರಿಸಲು ಮತ್ತು ಸಾರ್ವಜನಿಕ ಆರೋಗ್ಯದ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳುವ ನಿಟ್ಟಿನಲ್ಲಿ, ಬೆಂಗಳೂರು ನಗರ ಜಿಲ್ಲೆಯ ಶಾಲೆಗಳನ್ನು ಮುಂದಿನ ಆದೇಶದವರೆಗೆ ತಾತ್ಕಾಲಿಕವಾಗಿ ಸ್ಥಗಿತಗೊಳಿಸಲು ಕ್ರಮವಹಿಸುವಂತೆ ಉಲ್ಲೇಖ-02 ರಲ್ಲಿ ಈಗಾಗಲೇ ತಿಳಿಸಲಾಗಿರುತ್ತದೆ.

ಮುಂದುವರೆದು, "It is clarified that all coaching institutions for all classes including 10th, 11th and 12th in Bengaluru Urban District will also remain closed during the said period" ಎಂಬುದಾಗಿ ಉಲ್ಲೇಖ-3 ರ ಸರ್ಕಾರದ ಆದೇಶದಲ್ಲಿ ತಿಳಿಸಲಾಗಿರುತ್ತದೆ.

ಪ್ರಯುಕ್ತ, ದಿನಾಂಕ:06/01/2022 ರಿಂದ 19/01/2022 ರವರೆಗೆ ಅಥವಾ ಮುಂದಿನ ಆದೇಶದವರೆಗೆ ಬೆಂಗಳೂರು ನಗರ ಜಿಲ್ಲೆಯ ಬೆಂಗಳೂರು ಉತ್ತರ ಮತ್ತು ದಕ್ಷಿಣ ಶೈಕ್ಷಣಿಕ ಜಿಲ್ಲೆಗಳ ವ್ಯಾಪ್ತಿಯಲ್ಲಿನ 10 ನೇ ತರಗತಿಯವರೆಗಿನ ಆಯಾ ಭಾಗದ ಎಲ್ಲಾ ಕೋಚಿಂಗ್ ಕೇಂದ್ರಗಳನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲು ಕ್ರಮವಹಿಸುವಂತೆ ಸದರಿ ಕೋಚಿಂಗ್ ಕೇಂದ್ರಗಳ ಮುಖ್ಯಸ್ಥರಿಗೆ ಸೂಚನೆ ನೀಡಲು ಸದರಿ ಜಿಲ್ಲೆಗಳ ಉಪನಿರ್ದೇಶಕರು(ಆಡಳಿತ) ರವರಿಗೆ ತಿಳಿಸಿದೆ.

ಮುಂದುವರೆದು, ಉಲ್ಲೇಖ-01 ರಂತೆ ದಿನಾಂಕ:05/01/2022 ರಿಂದ 19/01/2022 ರ ಅವಧಿಯಲ್ಲಿ ಶುಕ್ರವಾರ ರಾತ್ರಿ 8 ಗಂಟೆಯಿಂದ ಸೋಮವಾರ ಬೆಳಗ್ಗೆ 5 ಗಂಟೆಯವರೆಗೆ ರಾಜ್ಯದಾದ್ಯಂತ ವಾರಾಂತ್ಯದ ನಿರ್ಬಂಧಗಳು (ಕರ್ಫ್ಯೂ) ಜಾರಿಯಲ್ಲಿರುವುದರಿಂದ, ಸದರಿ ಅವಧಿಯಲ್ಲಿನ ಶನಿವಾರಗಳಂದು ರಾಜ್ಯದಾದ್ಯಂತ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಶಾಲೆಗಳನ್ನು ನಡೆಸದಿರಲು ಸೂಕ್ತ ಕ್ರಮವಹಿಸುವಂತೆ ಆಯಾ ಜಿಲ್ಲೆಗಳ ಉಪನಿರ್ದೇಶಕರು(ಆಡಳಿತ) ರವರಿಗೆ ಈ ಮೂಲಕ ತಿಳಿಸಲಾಗಿದೆ.

ಈ ಆದೇಶವು ಸರ್ಕಾರದಿಂದ ಕಾಲಕಾಲಕ್ಕೆ ಹೊರಡಿಸಲಾಗುವ ಕೋವಿಡ್-19ರ ಮಾರ್ಗಸೂಚಿ/ಆದೇಶದ ಅನುಸಾರ ಬದಲಾವಣೆಗೆ ಒಳಪಟ್ಟಿರುತ್ತದೆ.

R. -
ಆಯುಕ್ತರು,
ಸಾರ್ವಜನಿಕ ಶಿಕ್ಷಣ ಇಲಾಖೆ,
ಬೆಂಗಳೂರು.

ಇವರಿಗೆ:-
1. ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಉತ್ತರ ಮತ್ತು ದಕ್ಷಿಣ ಜಿಲ್ಲೆ.
2. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಮತ್ತು ಉಪನಿರ್ದೇಶಕರು (ಅಭಿವೃದ್ಧಿ), ಸಾರ್ವಜನಿಕ ಶಿಕ್ಷಣ ಇಲಾಖೆ.
3. ಹಿರಿಯ ಸಹಾಯಕ ನಿರ್ದೇಶಕರು, ಇ-ಆಡಳಿತ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಕಳುಹಿಸುತ್ತಾ, ಇಲಾಖಾ ಅಂತರಜಾಲ ತಾಣದಲ್ಲಿ ಅಳವಡಿಸಲು ತಿಳಿಸಿದೆ.

4. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಆಯಾ ಉಪನಿರ್ದೇಶಕರು (ಆಡಳಿತ) ರವರ ಮೂಲಕ ಮುಂದಿನ ಕ್ರಮಕ್ಕಾಗಿ,
5. ರಾಜ್ಯದ ಎಲ್ಲಾ ಶಾಲಾ ಮುಖ್ಯಸ್ಥರಿಗೆ ಆಯಾ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ ಮುಂದಿನ ಕ್ರಮಕ್ಕಾಗಿ.

**ಪ್ರತಿಯನ್ನು ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ :~**

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಮತ್ತು ಅಧ್ಯಕ್ಷರು, ರಾಜ್ಯ ಕಾರ್ಯಕಾರಿಣಿ ಸಮಿತಿ,, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು ಇವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸುತ್ತಾ ಮಾನ್ಯ ಸಚಿವರ ಆದ್ಯ ಗಮನಕ್ಕೆ ತರಲು ಕೋರಿದೆ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
4. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರಿಗೆ.
5. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು.
6. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಅಭಿಯಾನ, ನೃಪತುಂಗ ರಸ್ತೆ, ಬೆಂಗಳೂರು.
7. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ.
8. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳಿಗೆ.
9. ಆಯುಕ್ತರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
10. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಬೆಂಗಳೂರು.
11. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು.
12. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
13. ನಿರ್ದೇಶಕರು, ಮಕ್ಕಳ ರಕ್ಷಣಾ ನಿರ್ದೇಶನಾಲಯ, ಬೆಂಗಳೂರು.
14. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ / ಕಲಬುರಗಿ.
15. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ.
16. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ನೋಡಲ್ ಅಧಿಕಾರಿಗಳಿಗೆ
17. ಸಹ ನಿರ್ದೇಶಕರು ಮಧ್ಯಾಹ್ನ ಉಪಹಾರ ಯೋಜನೆ ಬೆಂಗಳೂರು ರವರಿಗೆ.
18. ಕಛೇರಿ ಪ್ರತಿ.